All India Radio: Bangalore
Regional Bulletin In Kannada
05.02.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ಬದಲಾವಣೆ ಅಗತ್ಯ - ಉನ್ನತ ಶಿಕ್ಷಣ ಸಚಿವರ ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ
- ಆನೆಗಳ ಚಲನ ವಲನಗಳ ಬಗ್ಗೆ ಸ್ವದೇಶಿ ನಿರ್ಮಿತ ರೇಡಿಯೊ ಕಾಲರ್ ಅಳವಡಿಕೆ - ಅರಣ್ಯ ಸಚಿವ ಈಶ್ವರ್ ಖಂಡ್ರೆ
- ಗಣರಾಜ್ಯೋತ್ಸವ ಪರೆಡ್‌ನಲ್ಲಿ ಭಾಗವಹಿಸಿದ ಎನ್‌ಸಿಸಿ ಕೆಡೆಟ್‌ಗಳಿಗೆ ರಾಜಭವನದಲ್ಲಿಂದು ರಾಜ್ಯಪಾಲರಿಂದ ಅಭಿನಂದನೆ
- ಬೆಳಗಾವಿಯಲ್ಲಿ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಖಾಯಂ ಸಂಚಾರಿ ಪೀಠ ಆರಂಭ
- ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಹೋರಾಟ - ಪ್ರತಿಪಕ್ಷ ನಾಯಕ ಆರ್.ಅಶೋಕ

<><><><>

ದೋಷಪೂರಿತ ರಾಷ್ಟ್ರೀಯ ಶಿಕ್ಷಣ ನೀತಿ ೨೦೨೦ರ ವಿರುದ್ಧ ಎಲ್ಲರೂ ಒಗ್ಗೂಡಿ ಕೇಂದ್ರ ಸರ್ಕಾರ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗದ ಮೇಲೆ ಒತ್ತಡ ಹೇರಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ವಿವಿಧ ರಾಜ್ಯಗಳ ಉನ್ನತ ಶಿಕ್ಷಣ ಸಚಿವರ ಸಮಾವೇಶದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಜಾರಿಗೆ ತಂದ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಹಲವಾರು ನ್ಯೂನತೆಗಳಿವೆ. ರಾಜ್ಯ ಸರ್ಕಾರ ಅದಕ್ಕೆ ತಿದ್ದುಪಡಿಗಳನ್ನು ಮಾಡಲು ದಿಟ್ಟ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಹೇಳಿದ್ದಾರೆ. ಇಂದು ನಡೆದ ಸಮ್ಮೇಳನದ ಚರ್ಚೆಗಳು ಹಾಗೂ ತೀರ್ಮಾನಗಳು ಕೇಂದ್ರ ಸರ್ಕಾರವನ್ನು ತಲುಪಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಕೊಡಗು, ಚಿಕ್ಕಮಗಳೂರು, ಹಾಸನ ಸುತ್ತಮುತ್ತ ಆನೆಗಳು ನಾಡಿನಲ್ಲೇ ಸಂಚರಿಸುವ ಹಿನ್ನೆಲೆಯಲ್ಲಿ ಅವುಗಳ ಚಲನ ವಲನಗಳ ಬಗ್ಗೆ ಗಮನ ಹರಿಸಲು ಆನೆಗಳ ಹಿಂಡಿನ ನೇತೃತ್ವವಹಿಸುವ

ಹೆಣ್ಣಾನೆಗಳಿಗೆ ದೇಶೀ ನಿರ್ಮಿತ ರೇಡಿಯೋ ಕಾಲರ್ ಅಳವಡಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನ ಅರಣ್ಯ ಭವನದಲ್ಲಿಂದು ಸಚಿವರು ಕೆ.ಪಿ. ಟ್ರ್ಯಾಕರ್ ಎಂಬ ರೇಡಿಯೋ ಕಾಲರ್‌ಗಳನ್ನು ಬಂಡೀಪುರ ಮತ್ತು ನಾಗರಹೊಳೆ ಹುಲಿಸಂರಕ್ಷಿತ ಪ್ರದೇಶದ ಅಧಿಕಾರಿಗಳಿಗೆ ಹಸ್ತಾಂತರಿಸಿದರು.

೬ ಸಾವಿರದ ೩೯೫ ದೇಶದಲ್ಲೇ ಕರ್ನಾಟಕ ಅತಿ ಹೆಚ್ಚಿನ ಆನೆಗಳನ್ನು ಹೊಂದಿದೆ. ಆದರೆ ಆನೆಗಳ ಸಂಖ್ಯೆಗೆ ಅನುಗುಣವಾಗಿ ಅರಣ್ಯ ಪ್ರದೇಶ ಹೆಚ್ಚಳವಾಗದ ಕಾರಣ ಆನೆ-ಮಾನವ ಸಂಘರ್ಷ ಹೆಚ್ಚುತ್ತಿದೆ. ಅಮೂಲ್ಯವಾದ ಜೀವ ಉಳಿಸಲು ಆನೆಗಳಿಗೆ ರೇಡಿಯೋ ಕಾಲರ್ ಅಳವಡಿಸಿ ಸ್ಥಳೀಯರಿಗೆ ಮಾಹಿತಿ ನೀಡಲು ಸರ್ಕಾರ ಪ್ರಯತ್ನ ನಡೆಸಿದೆ ಎಂದು ಹೇಳಿದ್ದಾರೆ. ಅರಣ್ಯ ಇಲಾಖೆ ಪರಿಸರ ಸ್ನೇಹಿಯಾದ ಕಚ್ಚಾವಸ್ತುಗಳನ್ನೇ ಬಳಸಿ ಈ ರೇಡಿಯೋ ಕಾಲರ್ ತಯಾರಿಸಿದ್ದು, ವನ್ಯಜೀವಿಗಳಿಗಾಗಲೀ, ಪರಿಸರಕ್ಕಾಗಲೀ ಅಪಾಯವಿಲ್ಲ ಎಂದು ಅರಣ್ಯ ಸಚಿವರು ಸ್ಪಷ್ಟಪಡಿಸಿದ್ದಾರೆ.

<><><>

ದೆಹಲಿಯಲ್ಲಿ ಆಯೋಜಿಸಿದ್ದ ಗಣರಾಜ್ಯೋತ್ಸವ ಪಥ ಸಂಚಲನದಲ್ಲಿ ಭಾಗವಹಿಸಿ ಹಿಂದಿರುಗಿದ ಕರ್ನಾಟಕ ಮತ್ತು ಗೋವಾ ಕೆಡೆಟ್ ಕಾಪ್ಸ್ ಹಾಗೂ ಅಧಿಕಾರಿಗಳಿಗೆ ರಾಜಭವನದಲ್ಲಿಂದು ಅಭಿನಂದನಾ ಕಾರ್ಯಕ್ರಮ ನಡೆಯಿತು. ಈ ವೇಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಎನ್.ಸಿ.ಸಿ ಕೆಡೆಟ್ ಗಳನ್ನು ಅಭಿನಂದಿಸಿದರು. ಇದೇ ವೇಳೆ ಮಾತನಾಡಿದ ಅವರು, ದೆಹಲಿಯ ಗಣ್ಯರಾಜ್ಯೋತ್ಸವ ಪಥಸಂಚಲನದಲ್ಲಿ ಉತ್ತಮ ಪ್ರದರ್ಶನ ನೀಡಿದ್ದು ಅಭಿನಂದನಾರ್ಹ ಎಂದು ತಿಳಿಸಿದರು. ಕೆಡೆಟ್ ಗಳ ಪರಿಶ್ರಮದಿಂದ ಪಥಸಂಚಲನ ಅತ್ಯುತ್ತಮವಾಗಿ ಮೂಡಿ ಬಂದಿದೆ. ಎನ್.ಸಿ.ಸಿ, ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ ಹಾಗೂ ಸೇವಾ ಮನೋಭಾವವನ್ನು ಹುಟ್ಟುಹಾಕುತ್ತದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಎನ್‌ಸಿಸಿಗೆ ಸೇರಿ, ಸೇವಾ ಮನೋಭಾವದೊಂದಿಗೆ ರಾಷ್ಟ್ರಾಭಿವೃದ್ಧಿಗೆ ಯುವಜನತೆ ಶ್ರಮಿಸಬೇಕು ಎಂದು ಕಿವಿ ಮಾತು ಹೇಳಿದರು.

<><><>

ಈ ಬಾರಿಯ ಆಯವ್ಯಯದಲ್ಲಿ ದೇಶದ ಪ್ರಮುಖ ನಗರಗಳ ನಡುವೆ ೫೦ ನಮೋ ಭಾರತ್ ರೈಲುಗಳು ಸಂಚಾರಕ್ಕೆ ಹಸಿರು ನಿಶಾನೆ ತೋರಲಾಗಿದೆ. ಪ್ರಧಾನಿ ನರೇಂದ್ರ ಮೋದಿ, ಕರ್ನಾಟಕಕ್ಕೂ ೨ ರೈಲುಗಳ ಕೊಡುಗೆ ನೀಡಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ

ಸಾಮಾಜಿಕ ಜಾಲ ತಾಣದಲ್ಲಿ ತಿಳಿಸಿದ್ದಾರೆ. ಹುಬ್ಬಳ್ಳಿ-ದಾವಣಗೆರೆ ಮತ್ತು ಬೆಂಗಳೂರು-ಮೈಸೂರು ನಡುವೆ ೨ ನಮೋ ಭಾರತ್ ರೈಲುಗಳು ಪ್ರಸಕ್ತ ವರ್ಷದಿಂದಲೇ ಸಂಚರಿಸಲಿವೆ.

<><><>

ಬೆಂಗಳೂರಿನಲ್ಲಿ ಮತ್ತೊಂದು ವಿಮಾನ ನಿಲ್ದಾಣ ಆರಂಭಿಸುವ ಕುರಿತಂತೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರನ್ನು ಸಂಸದ ಡಾ.ಸಿ.ಎನ್.ಮಂಜುನಾಥ್ ನವದೆಹಲಿಯಲ್ಲಿಂದು ಭೇಟಿಯಾಗಿ ಚರ್ಚೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನ ವಿಮಾನ ನಿಲ್ದಾಣದ ಸಂಚಾರ ದಟ್ಟಣೆ ತಪ್ಪಿಸುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಸ್ಥಾಪನೆಗೆ ಮನವಿ ಮಾಡಲಾಗಿದೆ ಎಂದು ತಿಳಿಸಿದರು.

ಧ್ವನಿ: ಡಾ.ಮಂಜುನಾಥ್

<><><>

ಬೆಳಗಾವಿಯಲ್ಲಿ "ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಖಾಯಂ ಸಂಚಾರಿ ಪೀಠ" ಪ್ರಾರಂಭವಾಗಿದೆ. ಅಧಿಕ ಬೆಲೆ ನಿಗದಿ, ಸೇವೆಗಳಲ್ಲಿನ ಕೊರತೆ, ಉತ್ಪನ್ನಗಳ ಗುಣಮಟ್ಟ, ದಾರಿತಪ್ಪಿಸುವ ಜಾಹೀರಾತುಗಳು ಅಥವಾ ಮಾರಾಟಗಾರ ವ್ಯಾಪಾರಿಯ ಅನ್ಯಾಯದ ಕುರಿತು ಗ್ರಾಹಕರ ದೂರುಗಳನ್ನು ಪರಿಹರಿಸಲು ಸಂಚಾರಿ ಪೀಠಕ್ಕೆ ಚಾಲನೆ ದೊರೆತಿದೆ. ಇದರಿಂದ ಈ ಭಾಗದ ಜನರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವ ಕೆ. ಎಚ್ ಮುನಿಯಪ್ಪ ತಿಳಿಸಿದ್ದಾರೆ. ಕಾನೂನು, ಸಚಿವ ಎಚ್. ಕೆ ಪಾಟೀಲ್ ಮಾತನಾಡಿ , ಬೆಳಗಾವಿ ಜಿಲ್ಲೆಯಲ್ಲಿ ಅಂದಾಜು ೨ ಸಾವಿರಕ್ಕೂ ಅಧಿಕ ಮೇಲ್ಪಟ್ಟು ಗ್ರಾಹಕರ ಪ್ರಕರಣಗಳು ಬಾಕಿ ಇವೆ. ಮುಂದಿನ ದಿನಗಳಲ್ಲಿ ಗ್ರಾಹಕರು ತ್ವರಿತವಾಗಿ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದ್ದಾರೆ.

<><><>

ವಿರೋಧ ಪಕ್ಷದ ನಾಯಕನಾಗಿ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಹೋರಾಟ ಮಾಡುತ್ತಿದ್ದೇನೆಯೇ ಹೊರತು, ರಾಜ್ಯಾಧ್ಯಕ್ಷ ಸ್ಥಾನಕ್ಕೆ ಆಕಾಂಕ್ಷಿಯಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಕ್ಷದೊಳಗಿನ ಭಿನ್ನಮತದ ಕುರಿತು ಅಸಮಾಧಾನ ವ್ಯಕ್ತಪಡಿಸಿ, ಎಲ್ಲರೂ ಹೊಂದಾಣಿಕೆಯೊಂದಿಗೆ ಪಕ್ಷವನ್ನು ಮುನ್ನಡೆಸಬೇಕೆಂದು ತಿಳಿಸಿದ್ದಾರೆ. ರಾಷ್ಟ್ರೀಯ ನಾಯಕರು ನೀಡುವ ಸೂಚನೆಗಳನ್ನು

ಎಲ್ಲರೂ ಪಾಲಿಸಬೇಕು ಎಂದು ತಿಳಿಸಿರುವ ಅವರು, ಇತ್ತೀಚಿನ ಬೆಳವಣಿಗೆಯಿಂದ ಪಕ್ಷಕ್ಕೆ ಹಿನ್ನಡೆಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><>

ಉದ್ಯೋಗ ಖಾತ್ರಿ ಯೋಜನೆ ನರೇಗಾ ಕಾರ್ಯಕ್ರಮದಡಿ ೧೦೦ ಮಾನವ ದಿನಗಳನ್ನು ೧೫೦ ಮಾನವ ದಿನಗಳಿಗೆ ಏರಿಸಲು ಕೇಂದ್ರ ಸರ್ಕಾರಕ್ಕೆ ಮಾಡಿದ ಮನವಿಯನ್ನು ಒಪ್ಪದ ಕೇಂದ್ರ ಸರ್ಕಾರದ ನಿರ್ಣಯ ಬೇಸರದ ಸಂಗತಿಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬೆಂಗಳೂರಿನಲ್ಲಿ ಏರ್ಪಡಿಸಿದ್ದ ನರೇಗಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿದ ಅವರು, ಯೋಜನೆಯನ್ನು ಅತ್ಯುತ್ತಮವಾಗಿ ಅನುಷ್ಠಾನ ಮಾಡಿದ ಮೂರು ಹಂತದ ಪಂಚಾಯತಿಗಳು ಹಾಗೂ ಅನುಷ್ಠಾನ ಇಲಾಖೆಗಳಿಗೆ ಪ್ರಶಸ್ತಿ ವಿತರಿಸಿದರು.

<><><>

ಈ ಬಾರಿ ಭರತ ಹುಣ್ಣಿಮೆ ವೇಳೆ ಸವದತ್ತಿ ಯಲ್ಲಮ್ಮನ ಗುಡ್ಡದಲ್ಲಿ ಜಿಲ್ಲಾಡಳಿತ ವತಿಯಿಂದ ಜನಸಂದಣಿ ನಿರ್ವಹಣೆ, ಪಾರ್ಕಿಂಗ್, ಶೌಚಾಲಯ, ಎಲ್.ಇ.ಡಿ. ಸ್ಕ್ರೀನ್ ಅಳವಡಿಸಲಾಗುವುದು ಎಂದು ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರ, ದಾಸೋಹ ಭವನ ಮತ್ತು ಮೇವು ದಾಸೋಹ ಭವನ ನಿರ್ಮಾಣಕ್ಕೆ ಒಂದು ತಿಂಗಳಿನಲ್ಲಿ ಶಂಕುಸ್ಥಾಪನೆ ನೆರವೇರಿಸಲಾಗುವುದು. ಪವಿತ್ರ ಎಲ್ಲಮ್ಮ ಗುಡ್ಡದ ಅಭಿವೃದ್ಧಿಗೆ ಟಿಟಿಡಿ ಮಾದರಿಯನ್ನಾಗಿಟ್ಟುಕೊಂಡು ಅಭಿವೃದ್ಧಿ ಯೋಜನೆ ರೂಪಿಸಲಾಗುವುದು ಎಂದು ಹೇಳಿದ್ದಾರೆ.

ಧ್ವನಿ : ಹೆಚ್.ಕೆ. ಪಾಟೀಲ್

<><><>

ಹಾವೇರಿ ಜಿಲ್ಲೆಯಲ್ಲಿ ನಿರುದ್ಯೋಗ ಸಮಸ್ಯೆ ನಿವಾರಣೆ ಹಿನ್ನಲೆಯಲ್ಲಿ ಕೈಗಾರಿಕೆ ಸ್ಥಾಪನೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಈ ಹಿನ್ನಲೆಯಲ್ಲಿ ಕೈಗಾರಿಕಾ ಕಾರಿಡಾರ್ ನಿರ್ಮಾಣಕ್ಕೆ ಜಿಲ್ಲೆಯ ಕೋಳೂರ ಬಳಿ ೪೦೦ ಎಕರೆ ಜಮೀನು ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದು ವಿಧಾನಸಭೆ ಉಪಸಭಾಧ್ಯಕ್ಷ ರುದ್ರಪ್ಪ ಮಾನಪ್ಪ ಲಮಾಣಿ ಹೇಳಿದ್ದಾರೆ. ಹಾವೇರಿಯಲ್ಲಿಂದು ನಡೆದ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ "ಹಾವೇರಿ ಇನ್‌ವೆಸ್ಟ್" ಕಾರ್ಯಕ್ರಮ ಮಾಡಲಾಗುವುದು.

<><><>

ಉತ್ತರ ಕನ್ನಡ ಜಿಲ್ಲೆಯ ಕಾರವಾರ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಣ್ಣ ಹಣಕಾಸು ಸಂಸ್ಥೆಗಳು ಲೇವಾದೇವಿ ವ್ಯವಹಾರಸ್ಥರು ಭಾರತೀಯ ರಿಸರ್ವ್ ಬ್ಯಾಂಕ್‌ನ ಮಾರ್ಗಸೂಚಿ ಹಾಗೂ ನಿಯಮಗಳನ್ನು ಉಲ್ಲಂಘಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯ ಎಚ್ಚರಿಕೆ ನೀಡಿದ್ದಾರೆ. ವಿಜಯನಗರ ಜಿಲ್ಲೆಯಲ್ಲಿ ಸಣ್ಣ ಹಣಕಾಸು ಸಂಸ್ಥೆಗಳಿಂದ ಸಾರ್ವಜನಿಕರಿಗೆ ಸಮಸ್ಯೆಗಳಾಗುತ್ತಿರುವ ಹಿನ್ನೆಲೆಯಲ್ಲಿ ಇಂದು ಜಿಲ್ಲಾಧಿಕಾರಿ ಎಂಎಸ್ ದಿವಾಕರ್ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮತ್ತು ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಸೂಕ್ತ ನಿರ್ದೇಶನ ನೀಡಿದ್ದಾರೆ.

<><><><>

ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ೨೦೨೩-೨೪ ನೇ ಸಾಲಿನ ಅನುಷ್ಠಾನದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವೈಯಕ್ತಿಕ ಫಲಾನುಭವಿಗಳ ವಿಭಾಗದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ ಇರಗಂಪಲ್ಲಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ರೈತ ಚಿಕ್ಕವೆಂಕಟರಮಣಪ್ಪ ರಾಜ್ಯ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಬೆಂಗಳೂರಿನಲ್ಲಿ ನಡೆದ ನರೇಗಾ ಹಬ್ಬ  ಸಮಾರಂಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಪ್ರಶಂಸಾ ಪತ್ರ ಹಾಗೂ ಪ್ರಶಸ್ತಿ ಫಲಕವನ್ನು ನೀಡಿ ಗೌರವಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>